# Government of Karnataka
# Deposition Sheet Form No. R.P. 57

ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಲಿಂಗಸಗೂರ

ಸಿ/ ಸಿ ನಂಬರಃ 925/2025

ಸಿ ಡಬ್ಲ್ಯೂ- 16
ಪಿ ಡಬ್ಲ್ಯೂ- 10

| | | |
|---|---|---|
| ಸಾಕ್ಷಿದಾರರ ಹೆಸರು | ಃ- | ಪುಂಡಲಿಕ ಪಟಾತಾರ |
| ತಂದೆಯ ಹೆಸರು | ಃ- | ಮಾರುತಿ |
| ವಯಸ್ಸು | ಃ- | 50 ವರ್ಷ |
| ಉದ್ಯೋಗ | ಃ- | ಸಿ.ಪಿ.ಐ ದೇವದುರ್ಗ ಗ್ರಾಮೀಣ ಪೋಲಿಸ್ ಠಾಣೆ |
| ವಾಸಸ್ಥಳ | ಃ- | ದೇವದುರ್ಗ |

***ದಿ. 10-06-2026 ರಂದು ಸಾಕ್ಷಿಯನ್ನು ವಿಡಿಯೋ ಕಾನ್ಫಿರೆನ್ಸ ಮೂಲಕ ಕರೆಯಿಸಿ ಪ್ರಮಾಣವಚನ ಭೋದಿಸಲಾಯಿತು.***

***ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.***

ನಾನು ದಿನಾಂಕ 21-11-2023 ರಿಂದ 07-01-2026 ವರೆಗೆ ನಾನು ಲಿಂಗಸುಗುರು ಪೋಲಿಸ್ ಠಾಣೆಯಲ್ಲಿ ಪಿ.ಐ ಎಂದು ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕ 24-03-2025 ರಂದು ಸಂಜೆ 6-00 ನಾನು ಠಾಣೆಯಲ್ಲಿದ್ದಾಗ ಚಾ.ಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರಿನ ಆದಾರದ ಮೇಲೆ ಠಾಣಾ ಗುನ್ನಾ ಸಂಖ್ಯೆ 66/2025 ರಂತೆ ಪ್ರಕರಣವನ್ನು ದಾಖಲಿಸಿಕೊಂಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೂ ಹಾಗೂ ಮೇಲಾಧಿಕಾರಿಗಳಿಗೂ ಸಲ್ಲಿಸಿಕೊಂಡಿರುತ್ತೇನೆ. ದಿನಾಂಕ 26-03-2025 ರಂದು ಘಟನಾ ಸ್ಥಳಕ್ಕೆ ಬೆಟ್ಟಿ ನೀಡಿ ಚಾ.ಸಾ-1 ರವರು ತೋರಿಸಿದ ಸ್ಥಳದಲ್ಲಿ ಪಂಚರಾದ ಚಾಸಾ-2 ಮತ್ತು 3 ರವರ ಸಮಕ್ಷಮದಲ್ಲಿ ಬೆಳಿಗ್ಗೆ 11-00 ರಿಂದ 12-00 ಗಂಟೆಯವರೆಗೆ ಪಂಚನಾಮೆ ಮಾಡಿ, ಒಂದು ಕಪ್ಪುಬಣ್ಣದ ಬೆಲ್ಟ್ ಮತ್ತು ಬೂಟು ಜಪ್ತಿಪಡಿಸಿಕೊಂಡು ಪೋಟೋ ತೆಗೆಸಿರುತ್ತೇನೆ. ದಿನಾಂಕ 25-03-2025 ರಂದು ಗುನ್ನೆ ಸ್ಥಳದ ಕಾಲಕ್ಕೆ ಪೋಟೋ ತೆಗೆದ ಚಾ.ಸಾ-13 ರವರ ಹೇಳಿಕೆ ಪಡೆದು ಕಲಂ.63(4)(ಸಿ) ಅಡಿಯಲ್ಲಿ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ದಿನಾಂಕ 26-03-2025 ರಂದು ಚಾ.ಸಾ-4 ರಿಂದ 9 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ದಿನಾಂಕ 04-04-2025 ರಂದು ಚಾ.ಸಾ-10 ರಿಂದ 12 ರವರ ಹೇಳಿಕೆ ಪಡೆದಿರುತ್ತೇನೆ. ದಿನಾಂಕ 20-04-2025 ರಂದು ಚಾ.ಸಾ-1 ರವರ ಗಾಯದ

ಪ್ರಮಾಣ ಪತ್ರ ಪಡೆದು ಕಡತಕ್ಕೆ ಅಳವಡಿಸಿರುತ್ತೇನೆ. ದಿನಾಂಕ 01-05-2025 ರಂದು ಆರೋಪಿತರು ಸತ್ರ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದು ಠಾಣೆಗೆ ಹಾಜರಾಗಿದ್ದು ಸೂಕ್ತ ಜಾಮೀನು ಪಡೆದು ಬಿಡುಗಡೆ ಮಾಡಿರುತ್ತೇನೆ. ನಂತರ ಮನೆಯ ಖಾತಾ ಉತಾರ ಪಡೆಯಲು ಪತ್ರ ಬರೆದಿರುತ್ತೇನೆ. ದಿನಾಂಕ 15-05-2025 ರಂದು ಮನೆಯ ಖಾತಾ ಉತಾರ ಪಡೆದು ಕಡತಕ್ಕೆ ಅಳವಡಿಸಿರುತ್ತೇನೆ. ಅದೇ ದಿನ ಆರೋಫಿತರ ವಿರುದ್ದ ಆರೋಪ ಸಾಬೀತಾಗಿದ್ದರಿಂದ ಆರೋಪಿತರ ವಿರುದ್ದ ಅಂತಿಮ ವರದಿ ಸಲ್ಲಿಸಿರುತ್ತೇನೆ.

2. ದೂರನ್ನು ಈಗಾಗಲೇ ನಿ.ಪಿ-1 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿ.ಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗಾಗಲೇ ನಿ.ಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-2(ಬಿ) ಎಂದು ಗುರುತಿಸಲಾಯಿತು. ಸ್ಥಳ ಪಂಚನಾಮೆಯನ್ನು ಈಗಾಗಲೇ ನಿ.ಪಿ-3 ಎಂದು ಸಾಕ್ಷಿಯ ಸಹಿಯನ್ನು ನಿ.ಪಿ-3(ಡಿ) ಎಂದು ಗುರುತಿಸಲಾಯಿತು. ಪೋಟೋವನ್ನು ಈಗಾಗಲೇ ನಿ.ಪಿ-4 ಮತ್ತು 5 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿ.ಪಿ-5(ಎ) ಎಂದು ಗುರುತಿಸಲಾಯಿತು. ಗಾಯದ ಪ್ರಮಾಣ ಪತ್ರವನ್ನು ಈಗಾಗಲೇ ನಿ.ಪಿ-12 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿ.ಪಿ-12(ಬಿ) ಎಂದು ಗುರುತಿಸಲಾಯಿತು. ಪುರಸಭೆಯವರಿಗೆ ಬರೆದ ಪತ್ರವನ್ನು ನಿ.ಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-13(ಎ) ಎಂದು ಗುರುತಿಸಲಾಯಿತು. ಪುರಸಭೆಯವರು ನಮಗೆ ಬರೆದ ಪತ್ರವನ್ನು ನಿ.ಪಿ-14 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-14(ಎ) ಎಂದು, ಮನೆಯ ಖಾತಾ ಉತಾರನ್ನು ನಿ.ಪಿ-15 ಎಂದು ಗುರುತಿಸಲಾಯಿತು. ಸಾಕ್ಷಿಯು ಬೆಲ್ಟ್ ಮತ್ತು ಬೂಟನ್ನು ನೋಡಿ ಗುರುತಿಸಲಾಗಿದ್ದು ಅವುಗಳನ್ನು ಮುದ್ದೇಮಾಲು-1 ಮತ್ತು 2 ಎಂದು ಗುರುತಿಸಲಾಗಿದೆ.

***<u>ಪಾಟೀ ಸವಾಲು: ಶ್ರೀ. ಎ.ಸಿ.ಪಿ ವಕೀಲರಿಂದ. :-</u>***

ಪಂಚನಾಮೆಯನ್ನು ಗುನ್ನೆ ಜಾಗದಲ್ಲಿ ಬರೆದಿರುತ್ತೇವೆ. ತನಿಖೆ ಸಮಯದಲ್ಲಿ ನಾವು ಘಟನಾ ಸ್ಥಳಕ್ಕೆ ಬೇಟಿ ನೀಡಿಲ್ಲ ಎಂದರೆ ಸರಿಯಲ್ಲ. ತನಿಖೆ ಸಮಯದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ನಮ್ಮ ಮೇಲಾಧಿಕಾರಿಗಳ ಮಾತು ಕೇಳಿ ಚಾ.ಸಾ-1 ರವರ ಸುಳ್ಳೂ ದೂರಿನ ಅನ್ವಯ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾವು ಈ ಕೇಸಿಗಾಗಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ನಾವು ಯಾವುದೇ ಮುದ್ದೇಮಾಲುಗಳನ್ನು ಜಪ್ತಿಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿತರ

ವಿರುದ್ದ ಯಾವುದೇ ಆರೋಪ ಸಾಬೀತಾಗದೇ ಇದ್ದರೂ ಸಹ ಅವರ ವಿರುದ್ದ ಸುಳ್ಳು ಅಂತಿಮ ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

*(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು)*

ಓ. ಹೇ. ಕೇ. ಸರಿ ಇದೆ.

ಸಹಿ/-

ಪ್ರದಾನ ಸಿವಿಲ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ..
ಲಿಂಗಸಗೂರು.